**Akashvani : Bangalore**
**Regional Bulletin In Kannada**
**03.07.2026 / 18.40 hrs**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

೧. ರಾಜ್ಯದಲ್ಲಿ ಮುಂದಿನ ಎರಡು ತಿಂಗಳು ಕುಡಿಯುವ ನೀರಿನ ಸಮಸ್ಯೆ ಇಲ್ಲ - ಸಚಿವ ಜಾರಕಿಹೊಳಿ ಸ್ಪಷ್ಟನೆ; ಹಾವೇರಿಯಲ್ಲಿ ಮೋಡಬಿತ್ತನೆಗೆ ನಿರ್ಧಾರ

೨. ರಾಜ್ಯದ ಪ್ರತ್ಯೇಕ ಎಸ್‌ಐಆರ್ ಪ್ರಕ್ರಿಯೆಗೆ ಬಿಜೆಪಿ ಆಕ್ಷೇಪ; ಕೇಂದ್ರ ಚುನಾವಣಾ ಆಯೋಗಕ್ಕೆ ಸಚಿವೆ ಶೋಭಾ ಕರಂದ್ಲಾಜೆ ಪತ್ರ

೩. ಪರಿಶಿಷ್ಟರ ೧೯ ಬೇಡಿಕೆಗಳ ಕುರಿತು ಚರ್ಚೆ - ಜನಾಗ್ರಹ ಸಮಾವೇಶದಲ್ಲಿ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಭರವಸೆ

೪. ೧೫ನೇ ಹಣಕಾಸು ಆಯೋಗದ ೨ ಸಾವಿರದ ೧೮೬ ಕೋಟಿ ರೂಪಾಯಿ ಶೀಘ್ರ ಬಿಡುಗಡೆಗೆ ಕೇಂದ್ರಕ್ಕೆ ಸಚಿವ ಈಶ್ವರ್ ಖಂಡ್ರೆ ಒತ್ತಾಯ

೫. ಗೃಹ ಜ್ಯೋತಿ ಯೋಜನೆಯ ಪರಿಷ್ಕರಣೆ ವೇಳೆ ಫಲಾನುಭವಿಯ ಪ್ರವರ್ಗ ಮಾಹಿತಿ ಕಡ್ಡಾಯವಲ್ಲ - ಬೆಸ್ಕಾಂ ಸ್ಪಷ್ಟನೆ

**<><*<><>*><>**

ಮುಂಗಾರು ಮಳೆ ಕೊರತೆಯಿಂದ ರಾಜ್ಯದ ಪ್ರಮುಖ ಜಲಾಶಯಗಳು ಡೆಡ್ ಸ್ಟೋರೇಜ್ ಹಂತ ತಲುಪಿದ್ದರೂ ಎರಡು ತಿಂಗಳು ಕುಡಿಯುವ ನೀರಿಗೆ ಸಮಸ್ಯೆ ಇಲ್ಲ ಎಂದು ಬೆಳಗಾವಿ, ಧಾರವಾಡ ಮತ್ತು ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಹೇಳಿದ್ದಾರೆ. ಹಾವೇರಿಯಲ್ಲಿ ಜಿಲ್ಲಾ ಪ್ರಕೃತಿ ವಿಕೋಪ ನಿರ್ವಹಣಾ ಪ್ರಗತಿ ಪರಿಶೀಲನಾ ಸಭೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮುಂಬರುವ ದಿನಗಳಲ್ಲಿ ಮಳೆಯಾಗದಿದ್ದರೆ ಸಂಕಷ್ಟ ಎದುರಾಗಬಹುದು ಎಂದು ಕಳವಳ ವ್ಯಕ್ತಪಡಿಸಿದ್ದಾರೆ. ಕುಡಿಯುವ ನೀರಿನ ಸಮಸ್ಯೆ, ಬೆಳೆ ನಾಶದಿಂದಾಗಿ ಜನರ ಮೇಲಾಗುತ್ತಿರುವ ಪರಿಣಾಮಗಳ ಬಗ್ಗೆ ಬೆಳಗಾವಿ, ಧಾರವಾಡ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಪ್ರಕೃತಿ ವಿಕೋಪ ನಿರ್ವಹಣಾ ಪ್ರಗತಿ ಪರಿಶೀಲನೆ ನಡೆಸಲಾಗಿದ್ದು, ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**<><*<><>*><>**

ಸೂಪರ್ ಎಲ್ ನಿನೊ ಪ್ರಭಾವದಿಂದಾಗಿ ಹಾವೇರಿ ಜಿಲ್ಲೆಯಲ್ಲಿ ಮಳೆ ಕೊರತೆ ಉಂಟಾಗಿದ್ದು, ಮೋಡ ಬಿತ್ತನೆ ಮಾಡಲು ಸರ್ಕಾರದಿಂದ ಅನುಮತಿ ಸಿಕ್ಕಿದೆ. ಜುಲೈ ೭ ರಿಂದ ಜಿಲ್ಲೆಯ ಎಲ್ಲ ತಾಲ್ಲೂಕುಗಳಲ್ಲಿ ಮೋಡ ಬಿತ್ತನೆ ಮಾಡಲಾಗುವುದು ಎಂದು ರಾಣೆಬೆನ್ನೂರು ಶಾಸಕ ಪ್ರಕಾಶ ಕೋಳಿವಾಡ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ. ಹಾವೇರಿ ಜಿಲ್ಲಾ ಪಂಚಾಯಿತಿಯಲ್ಲಿ ನಡೆದ ಪ್ರಕೃತಿ ವಿಕೋಪ ಸಭೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಇಡೀ ರಾಜ್ಯದಲ್ಲಿ ಮೋಡ ಬಿತ್ತನೆಗೆ ಅವಕಾಶ ಸಿಗುವುದು ತಡವಾಗಲಿದೆ. ಹಾವೇರಿಯಲ್ಲಿ ಮೊದಲಿಗೆ ಜಿಲ್ಲೆಯ ಎಲ್ಲಾ ಶಾಸಕರ ಸಹಯೋಗದಲ್ಲಿ ಮೋಡ ಬಿತ್ತನೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

**<><*<><>*><>**

ಬೆಂಗಳೂರು ಸೇರಿದಂತೆ ರಾಜ್ಯದ ಹಲವೆಡೆ ಎಸ್‌ಐಆರ್ ಪ್ರಕ್ರಿಯೆ ನಿಯಮ ಪ್ರಕಾರ ನಡೆಯುತ್ತಿಲ್ಲ ಎಂದು ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಆರೋಪಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಚುನಾವಣಾ ಆಯೋಗವು, ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯ ಕೆಲವು ವಿಧಾನಸಭಾ ಕ್ಷೇತ್ರಗಳಲ್ಲಿ ಮತ್ತೊಂದು ಸಮಾನಾಂತರ ವಿಶೇಷ ತೀವ್ರ ಮತದಾರರ ಪಟ್ಟಿ ಪರಿಷ್ಕರಣೆ ಪ್ರಕ್ರಿಯೆ ಆರಂಭಿಸಿರುವುದನ್ನು ತಕ್ಷಣವೇ ನಿಲ್ಲಿಸಬೇಕು ಎಂದು ಆಗ್ರಹಿಸಿದ್ದಾರೆ. ಈ ಹಿನ್ನೆಲೆಯಲ್ಲಿ ತುರ್ತು ಮಧ್ಯಪ್ರವೇಶ ಮಾಡುವಂತೆ ಆಗ್ರಹಿಸಿ, ಕೇಂದ್ರ ಚುನಾವಣಾ ಆಯೋಗಕ್ಕೆ ಪತ್ರ ಬರೆದಿದ್ದಾರೆ. ಬಿಎಲ್‌ಒಗಳು ಮನೆ ಮನೆಗೆ ತೆರಳಿ, ಪರಿಶೀಲನೆ ನಡೆಸುವ ಬದಲು, ಕಲ್ಯಾಣ ಮಂಟಪಗಳಲ್ಲಿ ಎಸ್‌ಐಆರ್ ನಡೆಸಿದರೆ, ಅರ್ಹರಲ್ಲದ ವ್ಯಕ್ತಿಗಳು, ಅಕ್ರಮ ವಲಸಿಗರ ಹೆಸರುಗಳು ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗುವ ಅಪಾಯವಿದೆ ಎಂದು ಎಚ್ಚರಿಕೆ ನೀಡಿದ್ದಾರೆ. ಇನ್ನೊಂದೆಡೆ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ಎಸ್‌ಐಆರ್ ಪ್ರಕ್ರಿಯೆಯಲ್ಲಿ ಬೂತ್ ಮಟ್ಟದ ಅಧಿಕಾರಿಗಳನ್ನು ದುರುಪಯೋಗ ಪಡಿಸಿಕೊಳ್ಳಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

**<><*<><>*><>**

ಭೂಮಿ, ವಸತಿ, ಬ್ಯಾಕ್‌ಲಾಗ್ ಹುದ್ದೆಗಳ ಭರ್ತಿ, ಉದ್ಯೋಗ ಮೀಸಲಾತಿ ಸೇರಿದಂತೆ ಪರಿಶಿಷ್ಟರ ೧೯ ಬೇಡಿಕೆಗಳ ಕುರಿತು ಚರ್ಚೆ ನಡೆಸಲಾಗುವುದು ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಭರವಸೆ ನೀಡಿದ್ದಾರೆ. ಬೆಂಗಳೂರಿನಲ್ಲಿ ನಡೆದ ಜನಾಗ್ರಹ ಸಮಾವೇಶಕ್ಕೆ ಭೇಟಿ ನೀಡಿ, ಮನವಿ ಸ್ವೀಕರಿಸಿದ ಅವರು, ಸಾಧ್ಯವಾದರೆ ಸಭೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಆಹ್ವಾನಿಸುವುದಾಗಿ ತಿಳಿಸಿದ್ದಾರೆ. ಪರಿಶಿಷ್ಟರ ಹಕ್ಕೊತ್ತಾಯಗಳನ್ನು ಗಂಭೀರವಾಗಿ ಪರಿಗಣಿಸಿ, ಕಂದಾಯ ಇಲಾಖೆ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ, ಪರಿಹಾರ ಕಂಡುಕೊಳ್ಳಲು ಪ್ರಯತ್ನಿಸುವುದಾಗಿ ಹೇಳಿದ್ದಾರೆ.

<><*<><>*><>

ರಾಜ್ಯಕ್ಕೆ ೧೫ನೇ ಹಣಕಾಸು ಆಯೋಗದ ಶಿಫಾರಸಿನಂತೆ ೨೦೨೫-೨೬ನೇ ಸಾಲಿನಲ್ಲಿ ಬಾಕಿ ಇರುವ ೨ ಸಾವಿರದ ೧೮೬ ಕೋಟಿ ರೂಪಾಯಿಗಳನ್ನು ಕೂಡಲೇ ಬಿಡುಗಡೆ ಮಾಡುವಂತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಬಿ. ಖಂಡ್ರೆ ಒತ್ತಾಯಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ  ಕೇಂದ್ರ ಪಂಚಾಯತ್ ರಾಜ್ ಸಚಿವ ರಾಜೀವ್ ರಂಜನ್ ಸಿಂಗ್ ಅಧ್ಯಕ್ಷತೆಯಲ್ಲಿ ನಡೆದ ರಾಷ್ಟ್ರೀಯ ಸಮಾವೇಶದಲ್ಲಿ ಮಾತನಾಡಿದ ಅವರು ಗ್ರಾಮೀಣ ಜನರಿಗೆ ನೀರು ಪೂರೈಕೆ ರಾಜ್ಯದ ಆದ್ಯತೆಯಾಗಿದೆ ಎಂದು ಹೇಳಿದ್ದಾರೆ.  ಗ್ರಾಮ ಪಂಚಾಯಿತಿಗಳಿಗೆ ಸಕಾಲದಲ್ಲಿ ಹಣ ಬಿಡುಗಡೆ ಮಾಡದಿದ್ದರೆ ಕುಡಿಯುವ ನೀರು ಪೂರೈಕೆಗೂ ತೊಡಕಾಗಲಿದ್ದು  ಕೂಡಲೇ, ರಾಜ್ಯದ ಗ್ರಾಮ ಪಂಚಾಯಿತಿಗಳಿಗೆ ಬಾಕಿ ಇರುವ ೨ ಸಾವಿರದ ೧೮೬ ಕೋಟಿ ರೂಪಾಯಿ ಬಿಡುಗಡೆ ಮಾಡುವಂತೆ ಆಗ್ರಹಿಸಿದ್ದಾರೆ.

<><*<><>*><>

ರಾಜ್ಯಾದ್ಯಂತ ಜುಲೈ ೧ ರಿಂದ ಆರಂಭಗೊಂಡಿರುವ ಗೃಹ ಜ್ಯೋತಿ ಯೋಜನೆಯ ಮಾಹಿತಿ ಸಂಗ್ರಹಕ್ಕೆ ಸಂಬಂಧಿಸಿದಂತೆ ಫಲಾನುಭವಿಯ ಪ್ರವರ್ಗ ಕುರಿತು ಕೇಳಿರುವ ಮಾಹಿತಿ ಕಡ್ಡಾಯವಲ್ಲ ಎಂದು ಬೆಸ್ಕಾಂ ಸ್ಪಷ್ಟಪಡಿಸಿದೆ.  ಜಾತಿ ಪ್ರಮಾಣಕ್ಕೆ ಸಂಬಂಧಿಸಿದ ಮಾಹಿತಿ ಕೇವಲ ಐಚ್ಛಿಕವಾಗಿದೆ ಎಂದು ಬೆಸ್ಕಾಂ ತಿಳಿಸಿದೆ. ಫಲಾನುಭವಿಗಳಿಗೆ ಜಾತಿ ಮಾಹಿತಿ ನೀಡಲು ಇಷ್ಟವಿಲ್ಲದಿದ್ದರೆ, ಮೊಬೈಲ್ ಅಪ್ಲಿಕೇಶನ್‌ನಲ್ಲಿರುವ ಮಾಹಿತಿ ನೀಡಲು ನಿರಾಕರಣೆ ಎಂಬ ಆಯ್ಕೆಯನ್ನು ನಮೂದಿಸಲು ಸಿಬ್ಬಂದಿಗೆ ಸೂಚನೆ ನೀಡಲಾಗಿದೆ.

<><*<><>*><>

ರಾಜ್ಯವನ್ನು ದೇಶದ ಪ್ರಮುಖ ಪ್ರವಾಸೋದ್ಯಮ ತಾಣವನ್ನಾಗಿ ರೂಪಿಸುವ ನಿಟ್ಟಿನಲ್ಲಿ 'ಕರಾವಳಿ-ಮಲೆನಾಡು ಕರ್ನಾಟಕ ಪ್ರವಾಸೋದ್ಯಮ ನೀತಿ - ೨೦೨೬' ರೂಪಿಸಲಾಗುತ್ತಿದೆ ಎಂದು ಇಂಧನ ಮತ್ತು ಪ್ರವಾಸೋದ್ಯಮ ಸಚಿವ ಕೆ.ಜೆ.ಜಾರ್ಜ್ ತಿಳಿಸಿದ್ದಾರೆ. ಪ್ರವಾಸೋದ್ಯಮ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಯೋಜನೆಯ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಬೀಚ್ ಪ್ರವಾಸೋದ್ಯಮ ಮತ್ತಷ್ಟು ಬಲಪಡಿಸುವ ನಿಟ್ಟಿನಲ್ಲಿ ಬ್ಲೂ ಫ್ಲಾಗ್ ಬೀಚ್‌ಗಳ ಅಭಿವೃದ್ಧಿ, ಸ್ವಚ್ಛತೆ, ಜಲಕ್ರೀಡೆಗಳು, ಸಾಹಸ ಚಟುವಟಿಕೆಗಳನ್ನು ನೂತನ ನೀತಿಯಲ್ಲಿ ಸೇರಿಸಲಾಗುವುದು ಎಂದು ಹೇಳಿದ್ದಾರೆ.

<><*<><>*><>

ಉಪ ಮುಖ್ಯಮಂತ್ರಿ ಹಾಗೂ ಕ್ರೀಡಾ ಸಚಿವ ಡಾ. ಜಿ. ಪರಮೇಶ್ವರ್ ಅವರನ್ನು ಬೆಂಗಳೂರಿನಲ್ಲಿಂದು ಗ್ಲೋಬಲ್ ಚೆಸ್ ಲೀಗ್ ನಿಯೋಗ ಭೇಟಿ ಮಾಡಿ ಚರ್ಚೆ ನಡೆಸಿದೆ. ಗ್ಲೋಬಲ್ ಚೆಸ್ ಲೀಗ್‌ನ ೪ನೇ ಆವೃತ್ತಿಯನ್ನು ಬೆಂಗಳೂರಿನಲ್ಲಿ ಆಯೋಜಿಸಲು ಉತ್ಸುಕತೆ ವ್ಯಕ್ತಪಡಿಸಿದ ನಿಯೋಗವು, ಈ ಸಂಬಂಧ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಕಾರವನ್ನು ಕೋರಿದೆ. ಈ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್, ವಿಶ್ವಮಟ್ಟದ ಕ್ರೀಡಾಕೂಟಗಳಿಗೆ ಬೆಂಗಳೂರು ಆತಿಥ್ಯ ವಹಿಸುವ ಮೂಲಕ ರಾಜ್ಯದ ಕ್ರೀಡಾ ಕ್ಷೇತ್ರಕ್ಕೆ ಹೊಸ ಉತ್ತೇಜನ ದೊರೆಯಲಿದೆ. ಇಂತಹ ಪ್ರತಿಷ್ಠಿತ ಕಾರ್ಯಕ್ರಮಗಳಿಗೆ ಸರ್ಕಾರ ಅಗತ್ಯ ಸಹಕಾರ ನೀಡಲು ಬದ್ಧವಾಗಿದೆ ಎಂದು ತಿಳಿಸಿದ್ದಾರೆ.

<><*<><>*><>

ಅಣೆಕಟ್ಟಿನ ನೀರನ್ನು ನಂಬಿಕೊಂಡು ರೈತರು ಬೆಳೆಗಳನ್ನು ಬೆಳೆಯಬೇಡಿ ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಮಾಡಿದ ಮನವಿಗೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.  ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಈ ಹೇಳಿಕೆಯು ರೈತ ಸಮುದಾಯವನ್ನು ನಿರಾಶೆಗೊಳಿಸಿದೆ ಎಂದು ತಿಳಿಸಿದ್ದಾರೆ. ಇಡೀ ದೇಶವೇ ಬರಗಾಲ ಪರಿಸ್ಥಿತಿ ಎದುರಿಸುತ್ತಿದ್ದು, ಇಂತಹ ಸಂದರ್ಭದಲ್ಲಿ ಸರ್ಕಾರ ರೈತರಲ್ಲಿ ಆತ್ಮವಿಶ್ವಾಸ ತುಂಬಬೇಕು ಎಂದು ಹೇಳಿದ್ದಾರೆ. ಸರ್ಕಾರ, ಬರಪರಿಸ್ಥಿತಿ ಎದುರಿಸಲು ಜಿಲ್ಲಾಧಿಕಾರಿಗಳಿಗೆ ಹಣ ಬಿಡುಗಡೆ ಮಾಡಿಲ್ಲ ಎಂದು ದೂರಿದ್ದಾರೆ.

<><*<><>*><>

ವಿಜಯಪುರ ಜಿಲ್ಲೆಯಲ್ಲಿ ಮಳೆ ಕೊರತೆಯಾದಲ್ಲಿ ಪರ್ಯಾಯ ಮಾರ್ಗಗಳನ್ನು ಕೈಗೊಳ್ಳುವಂತೆ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಖುಷ್ಬು ಗೋಯಲ್ ಚೌಧರಿ ತಿಳಿಸಿದ್ದಾರೆ. ವಿಜಯಪುರದಲ್ಲಿ ಆಯೋಜಿಸಿದ್ದ ಪ್ರಗತಿ

ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಮುಂಗಾರು ಮಳೆ ಸಮರ್ಪಕವಾಗಿ ಆಗದೇ ಇದ್ದರೆ, ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದ್ದಾರೆ.

**<><*<><>*><>**

ರಾಜ್ಯದಲ್ಲಿ ಮತದಾರರ ಪಟ್ಟಿಗಳ ವಿಶೇಷ ಸಮಗ್ರ ಪರಿಷ್ಕರಣೆ ಮುಂದುವರಿದಿದೆ. ವಿಜಯಪುರ ಜಿಲ್ಲೆಯಾದ್ಯಂತ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಆರಂಭಗೊಂಡಿದ್ದು, ಇಲ್ಲಿಯವರೆಗೆ ೪ ಲಕ್ಷದ ೬೮ ಸಾವಿರದ ೬೮೧ ಗಣತಿ ನಮೂನೆ ಮತದಾರರಿಗೆ ವಿತರಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ ಮಾಹಿತಿ ನೀಡಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**